ಇ) ಇಲ್ಲ. ಇಂದಿರಾ ಆವಾಸ್ ಯೋಜನೆಯು ಕೇಂದ್ರ ಪುರಸ್ಕೃತಯೋಜನೆಯಾಗಿದ್ದು ಈ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರದ ನಿಯಮಾವಳಿ ಪ್ರಕಾರ ಕಾರ್ಯಕ್ರಮ ಅನುಷ್ಠಾನಗೊಳಿಸಬೇಕಾಗಿರುತ್ತದೆ.

ಈ) ಕೇಂದ್ರ ಸರ್ಕಾರದ ನಿಯಮಾವಳಿಯಂತೆ ಇಂದಿರಾ ಆವಾಸ್ ಯೋಜನೆಯನ್ನು ಗ್ರಾಮ ಪಂಚಾಯತ್‌ಗಳ ಮೂಲಕವೇ ಅನುಷ್ಠಾನಗೊಳಿಸಬೇಕಾಗಿರುತ್ತದೆ. ಇಲ್ಲವಾದಲ್ಲಿ ಕೇಂದ್ರ ಸರ್ಕಾರದಿಂದ ಅನುದಾನ ತಡೆಹಿಡಿಯುವ ಸಾಧ್ಯತೆ ಇರುತ್ತದೆ.

ಗ್ರಾಮ ಪಂಚಾಯತಿ ಮಟ್ಟದಲ್ಲಿ ನಿಗದಿಪಡಿಸಿದ ಗುರಿಗೆ ಎದುರಾಗಿ ಅರ್ಹ ಫಲಾನುಭವಿಗಳು ಲಭ್ಯವಿಲ್ಲದಿದ್ದಲ್ಲಿ ಗುರಿಯನ್ನು ಅದೇ ತಾಲ್ಲೂಕಿನ ಇತರೆ ಗ್ರಾಮ ಪಂಚಾಯತಿಗೆ ವರ್ಗಾಯಿಸಲು ಅವಕಾಶ ನೀಡಲಾಗಿರುತ್ತದೆ.

585 (1181) ಶ್ರೀಮತಿ ಶಕುಂತಲಾ ಟಿ.ಶೆಟ್ಟಿ (ಪುತ್ತೂರು) :– ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನೌಕರರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸಲಾಗಿದೆಯೇ; ಹಾಗಿದ್ದಲ್ಲಿ, ಈವರೆಗೂ ಜಾರಿಯಾಗದಿರಲು ಕಾರಣಗಳೇನು ತಿಳಿಸುವುದು;

ಆ) ಇದರ ಪ್ರಕ್ರಿಯೆಯು ಯಾವ ಹಂತದಲ್ಲಿದೆ, ವಿಳಂಬಕ್ಕೆ ಕಾರಣವೇನು, ಯಾವಾಗ ಜಾರಿ ಮಾಡಲಾಗುವುದು;

ಇ) ಈ ವಿಳಂಬ ನೀತಿಯಿಂದಾಗಿ ಈ ಇಲಾಖೆಯ ನೌಕರ–ಸಿಬ್ಬಂದಿಗಳಿಗೆ ಬಡ್ತಿ – ಪದೋನ್ನತಿ ಮುಂಬಡ್ತಿಗೆ ತೊಂದರೆಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಜರುಗಿಸಲಾಗುವುದು;

ಈ) ಇದರ ಪರಿಣಾಮವಾಗಿ ಅನ್ಯ ಇಲಾಖೆಗಳಿಂದ ನಿಯೋಜನೆ ಮೇರೆಗೆ ಸೇವೆಗೆ ಬರುತ್ತಿರುವ ನೌಕರ–ಸಿಬ್ಬಂದಿಗಳ ಸಂಖ್ಯೆ ಜಾಸ್ತಿಯಾಗಿರುವುದು ನಿಜವೇ;

ಉ) ನಿಜವಿದ್ದಲ್ಲಿ, ಇದರ ನಿವಾರಣೆಗೆ ಸರ್ಕಾರದ ಕ್ರಮಗಳೇನು ಹಾಗೂ ಪಂಚಾಯಿತಿ ವಿಸ್ತರಣಾಧಿಕಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಗ್ರೇಡ್–2ರ ಹುದ್ದೆಯ ಬಡ್ತಿಗೆ ವರದಿ ಪಡೆಯಲಾಗಿದೆಯೇ; ಈ ನೌಕರರಿಗೆ ಬಡ್ತಿ ನೀಡಲು ಇನ್ನೂ ಬೇಕಾಗುವ ಸಮಯವೆಷ್ಟು; (ವಿವರ ಒದಗಿಸುವುದು)?

ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ, ಆ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಭಿವೃದ್ಧಿ ವಿಭಾಗಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸಾಮಾನ್ಯ ಸೇವಾ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಸರ್ಕಾರಿ ಶಾಖೆ (ನೇಮಕಾತಿ) ನಿಯಮಗಳು 1962 ಈಗಾಗಲೇ ಚಾಲ್ತಿಯಲ್ಲಿದೆ. ಆದರೆ 1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದಡಿಯಲ್ಲಿ ಜಿಲ್ಲಾ ಪಂಚಾಯತ್‌ಗಳಲ್ಲಿ ವಿಲೀನಗೊಂಡ ನೌಕರರ ಸೇವಾ ನಿರ್ವಹಣೆಗೆ ಸಂಬಂಧಿಸಿದಂತೆ ನಿಯಮಗಳ ರಚನೆ ಕುರಿತಾದ ವಿಷಯ ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ಇ) 1983ರ ಪಂಚಾಯತ್ ರಾಜ್ ಕಾಯ್ದೆಯು ನಿರಸನಗೊಂಡಿದ್ದು, 1993ರ ಕಾಯ್ದೆಯನ್ನು ಜಾರಿಗೊಳಿಸಿರುವ ಹಿನ್ನೆಲೆಯಲ್ಲಿ ಜಿಲ್ಲಾ ಪಂಚಾಯತ್ ನೌಕರರಿಗೆ ಸೇವಾ ನಿಯಮವನ್ನು ರಚಿಸುವ ಪ್ರಸಂಗವಿರುವುದರಿಂದ, ಇದನ್ನು ಸಮಗ್ರವಾಗಿ ಪರಿಶೀಲಿಸಿ ಸರ್ಕಾರದ ಅತ್ಯುನ್ನತ ಹಂತದಲ್ಲಿ ನಿರ್ಣಯ ಕೈಗೊಂಡು ಜಾರಿಗೊಳಿಸಬೇಕಾಗಿರುವುದರಿಂದ, ಈ ಪ್ರಕ್ರಿಯೆಗೆ ಹೆಚ್ಚು ಸಮಯ ತೆಗೆದುಕೊಂಡಿದೆಯೇ ಹೊರತು ವಿಳಂಬ ನೀತಿ ಇರುವುದಿಲ್ಲ.

ಈ) ಜಿಲ್ಲಾ ಪಂಚಾಯಿತಿ ಇತ್ಯಾದಿಗಳನ್ನು ಸೃಜಿಸಿದ ನಂತರ ಸದರಿ ಕಛೇರಿಗಳ ಕೆಲಸಗಳನ್ನು ಸುಸೂತ್ರವಾಗಿ ನಿರ್ವಹಿಸಲು ಅನುವಾಗುವಂತೆ ಸರ್ಕಾರದ ಬೇರೆ ಬೇರೆ ಇಲಾಖೆಗಳಿಂದ ನೌಕರರನ್ನು ನಿಯೋಜನೆ ಮೇರೆಗೆ ನೇಮಿಸಲಾಗಿದೆ.

ಸೂಕ್ತ ಸಮಯದಲ್ಲಿ, ಹಾಗೂ ಅವರ ಅಗತ್ಯತೆಯು ಇಲ್ಲವೆಂಬ ಪ್ರಸಂಗ ಒದಗಿ ಬಂದಾಗ ಅವರುಗಳನ್ನು ಮಾತೃ ಇಲಾಖೆಗೆ ಹಿಂದಿರುಗಿಸಲಾಗುವುದು.

ಉ) ಖಾಲಿ ಇರುವ ಪಂಚಾಯಿತಿ ವಿಸ್ತರಣಾಧಿಕಾರಿಗಳಿಗೆ ಬಡ್ತಿ ಮೂಲಕ ಭರ್ತಿ ಮಾಡಲು ಗ್ರೇಡ್–1 ಗ್ರಾಮ ಪಂಚಾಯಿತಿ ಕಾರ್ಯದರ್ಶಿ ವೃಂದದ ಜೇಷ್ಠತಾ ಪಟ್ಟಿಯಲ್ಲಿನ ಅರ್ಹ ನೌಕರರ ಸೇವಾ ವಿವರಗಳನ್ನು ಪಡೆದು ಪರಿಶೀಲಿಸಲಾಗುತ್ತಿದೆ. ಮಿತವ್ಯಯ ಆದೇಶದಡಿ ಬಡ್ತಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದ ತಕ್ಷಣವೇ ಬಡ್ತಿ ನೀಡಲು ಕ್ರಮ ವಹಿಸಲಾಗುವುದು.

586 (896) ಶ್ರೀ ಹೆಚ್.ಎಸ್.ಶಂಕರಲಿಂಗೇಗೌಡ (ಚಾಮರಾಜ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?